## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021-22 ನೇ ಸಾಲಿನ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಜುಲೈ 2021 ರಿಂದ ಸೆಪ್ಟೆಂಬರ್ 2021ರ ಮಾಹೆಗಳ ಅವಧಿಗೆ ಎರಡನೇ ತ್ರೈಮಾಸಿಕ ಕಂತಿನ ಗೌರವಧನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. 2021-22 ನೇ ಸಾಲಿನಲ್ಲಿ ಆಯವ್ಯಯದನ್ವಯ ಆರ್ಥಿಕ ಇಲಾಖೆಯು ನಿಗದಿಪಡಿಸಿದಂತೆ.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03-05-2017
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 245 ಜಿಪಸ 2021, ದಿನಾಂಕ: 31.05.2021

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಬಿಡುಗಡೆ ಮಾಡುವ ಸಂಬಂಧ ಓದಲಾದ (1)ರಲ್ಲಿ 2021-22 ನೇ ಆರ್ಥಿಕ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ: 2515-00-103-0-98-324 (2515-00-198-1-11-300) (ಯೋಜನೇತರ) ರಡಿ ಆಯವ್ಯಯದಲ್ಲಿ ರೂ.13932.84 ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿದೆ.

ಮೇಲೆ ಓದಲಾದ (2) ರ ಆದೇಶದನ್ವಯ, ಓದಲಾದ (3) ರಲ್ಲಿ 2021-22ನೇ ಸಾಲಿನ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಮೊದಲನೇ ಕಂತು ರೂ.34,51,35,000/-ಗಳನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ. ಪ್ರಸ್ತುತ, ಜುಲೈ 2021 ರಿಂದ ಸೆಪ್ಟೆಂಬರ್ 2021ರ ಮಾಹೆಗಳ ಅವಧಿಗೆ ಎರಡನೇ ತ್ರೈಮಾಸಿಕ ಕಂತಿನ ಗೌರವಧನವನ್ನು 2021-22ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 2515-00-103-0-98-324 (2515-00-198-1-11-300) (ಯೋಜನೇತರ) ರಡಿ ನಿಗಧಿಪಡಿಸಿರುವ ಅನುದಾನದಲ್ಲಿ ರೂ.33,72,18,000/- (ಮೂವತ್ತಮೂರು ಕೋಟಿ ಎಪ್ಪತ್ತೆರಡು ಲಕ್ಷದ ಹದಿನೆಂಟು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಲಗತ್ತಿಸಲಾದ ಅನುಬಂಧದನ್ವಯ ನಿಗಧಿಪಡಿಸಲಾಗಿರುತ್ತದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 245 ಜಿಪಸ 2021, ಬೆಂಗಳೂರು ದಿನಾಂಕ:18-09-2021.**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, 2021-22ನೇ ಸಾಲಿನ ಆರ್ಥಿಕ ವರ್ಷದ ಜುಲೈ 2021 ರಿಂದ ಸೆಪ್ಟೆಂಬರ್ 2021ರ ಮಾಹೆಗಳ ಅವಧಿಗೆ ಮಾತ್ರ ಅನ್ವಯಿಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಲೆಕ್ಕ ಶೀರ್ಷಿಕೆ: 2515-00-103-0-98-324 (2515-00-198-1-11-300) (ಯೋಜನೇತರ)ರಡಿ ಲಭ್ಯವಿರುವ ಅನುದಾನದಲ್ಲಿ ರೂ.33,72,18,000/- (ಮೂವತ್ತಮೂರು ಕೋಟಿ ಎಪ್ಪತ್ತೆರಡು ಲಕ್ಷದ ಹದಿನೆಂಟು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.

ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಬಿಡುಗಡೆಗೊಳಿಸಿರುವ ಮಾಸಿಕ ಗೌರವಧನದ ಜಿಲ್ಲಾವಾರು ಮೊತ್ತಗಳನ್ನು ಈ ಆದೇಶದೊಂದಿಗೆ ಲಗತ್ತಿಸಿದ ಅನುಬಂಧದಲ್ಲಿ ನೀಡಿದೆ. ಜಿಲ್ಲಾವಾರು ಗೌರವಧನದ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ (ಖಜಾನೆ-2ನ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್

ಕೋಡ್-ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಕೋಡ್)ಕೋಡ್‌ಗಳಿಗೆ ಖಜಾನೆ-2 ತಂತ್ರಾಂಶದ ಮೂಲಕ ಅಪ್‌ಲೋಡ್ ಮಾಡಲು ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ಅನುಮತಿಸಿದೆ.

**ಮಾಸಿಕ ಗೌರವಧನದ ಮೊತ್ತಗಳನ್ನು ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪಾವತಿಸುವುದು.**

1. ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವ ಆಯಾ ಜಿಲ್ಲೆಗಳ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ (ಖಜಾನೆ-2 ನ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್ ಕೋಡ್) ಕೋಡ್‌ಗಳಿಗೆ ಅಪ್‌ಲೋಡ್ ಮಾಡಿರುವುದರಿಂದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಖಜಾನೆಯಿಂದ ತಮ್ಮ ಮೊತ್ತಗಳನ್ನು ಸೆಳೆಯುವುದು.
2. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳ ಸಂಖ್ಯೆಗಳನ್ನು ನಿಖರವಾಗಿ ಗಣನೆಗೆ ತೆಗೆದುಕೊಂಡು ಪ್ರತಿ ಗ್ರಾಮ ಪಂಚಾಯತಿಗೆ ನೀಡಬೇಕಾಗಿರುವ ಮೊತ್ತಗಳನ್ನು ಲೆಕ್ಕಹಾಕಿ ಅಂತಹ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಬ್ಯಾಂಕ್ ಉಳಿತಾಯ ಖಾತೆಗಳಿಗೆ ಆರ್.ಟಿ.ಜಿ.ಎಸ್/ಎನ್.ಇ.ಎಫ್.ಟಿ ವಿಧಾನದ ಮೂಲಕ ವರ್ಗಾಯಿಸಿ ಚುನಾಯಿತ ಪ್ರತಿನಿಧಿಗಳಿಗೆ ಮಾಸಿಕ ಗೌರವಧನಗಳನ್ನು ಪಾವತಿಸಲು ಸೂಚನೆಗಳನ್ನು ನೀಡುವುದು.
3. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಜುಲೈ 2021 ರಿಂದ ಸೆಪ್ಟೆಂಬರ್ 2021ರ ಮಾಹೆಗಳ ಗೌರವಧನವನ್ನು ಪಾವತಿಸಲು ಮಾತ್ರ ವಿನಿಯೋಗಿಸುವುದು. ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
4. **ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗೆ ಮರುಬಿಡುಗಡೆಗೊಳಿಸಲು ಕ್ರಮವಹಿಸುವುದು ತಪ್ಪಿದ್ದಲ್ಲಿ ಗ್ರಾಮ ಪಂಚಾಯತಿಗಳಿಗೆ ಬಡ್ಡಿಯೊಂದಿಗೆ ಪಾವತಿಸತಕ್ಕದ್ದು ಹಾಗೂ ನಿಗದಿತ ಅವಧಿಯೊಳಗೆ ಈ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದು.**

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 266 ವೆಚ್ಚ 6/2021(ಇ) ದಿನಾಂಕ: 16.09.2021 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Chetna 18/9/21
**(ಚೇತನ. ಎಂ)**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18/09/21

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ಸಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ಸಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ಸಂ.5329) ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
7. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
8. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು-(ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ)
11. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
12. ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
13. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
14. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

**************

## 2021-22 ನೇ ಸಾಲಿನ ಎರಡನೆಯ ಕಂತಿನ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರ ಗೌರವಧನ ಜಿಲ್ಲಾವಾರು ಬಿಡುಗಡೆಯ ವಿವರದ

## ಅನುಬಂಧ

(ರೂ.ಗಳಲ್ಲಿ)

| ಕ್ರಸಂ | ಜಿಲ್ಲೆಯ ಹೆಸರು | ಒಟ್ಟು ಗ್ರಾ.ಪಂ | ಒಟ್ಟು ಸದಸ್ಯರ ಸಂಖ್ಯೆ | ಅಧ್ಯಕ್ಷರ ಗೌರವಧನ | ಉಪಾಧ್ಯಕ್ಷರ ಗೌರವಧನ | ಸದ್ಯಸರ ಗೌರವಧನ | ಬಿಡುಗಡೆ ಮಾಡಬೇಕಿರುವ ಒಟ್ಟು ಮೊತ್ತ |
|---|---|---|---|---|---|---|---|
| 1 | ಬೆಂಗಳೂರು ನಗರ | 93 | 2357 | 837000 | 558000 | 6513000 | 7908000 |
| 2 | ಬೆಂಗಳೂರು (ಗ್ರಾ) | 97 | 1751 | 873000 | 582000 | 4950000 | 6405000 |
| 3 | ರಾಮನಗರ | 127 | 2059 | 1143000 | 762000 | 5415000 | 7320000 |
| 4 | ಚಿತ್ರದುರ್ಗ | 189 | 3421 | 1701000 | 1134000 | 9129000 | 11964000 |
| 5 | ದಾವಣಗೆರೆ | 194 | 2641 | 1746000 | 1164000 | 6759000 | 9669000 |
| 6 | ಕೋಲಾರ | 156 | 2769 | 1404000 | 936000 | 7371000 | 9711000 |
| 7 | ಚಿಕ್ಕಬಳ್ಳಾಪುರ | 157 | 2497 | 1413000 | 942000 | 6549000 | 8904000 |
| 8 | ಶಿವಮೊಗ್ಗ | 251 | 2698 | 2259000 | 1506000 | 6588000 | 10353000 |
| 9 | ತುಮಕೂರು | 330 | 5344 | 2970000 | 1980000 | 14052000 | 19002000 |
| 10 | ಮೈಸೂರು | 250 | 4233 | 2250000 | 1500000 | 11199000 | 14949000 |
| 11 | ಚಿಕ್ಕಮಗಳೂರು | 196 | 2105 | 1764000 | 1176000 | 5139000 | 8079000 |
| 12 | ದಕ್ಷಿಣಕನ್ನಡ | 229 | 3404 | 2061000 | 1374000 | 8838000 | 12273000 |
| 13 | ಉಡುಪಿ | 155 | 2400 | 1395000 | 930000 | 6270000 | 9310170* |
| 14 | ಹಾಸನ | 267 | 3744 | 2403000 | 1602000 | 9630000 | 13635000 |
| 15 | ಕೊಡಗು | 104 | 1246 | 936000 | 624000 | 3114000 | 4674000 |
| 16 | ಮಂಡ್ಯ | 232 | 4004 | 2088000 | 1392000 | 10620000 | 14100000 |
| 17 | ಚಾಮರಾಜನಗರ | 130 | 2150 | 1170000 | 780000 | 5670000 | 7620000 |
| 18 | ಬೆಳಗಾವಿ | 499 | 8428 | 4491000 | 2994000 | 22290000 | 29775000 |
| 19 | ವಿಜಯಪುರ | 202 | 3814 | 1818000 | 1212000 | 10230000 | 13260000 |
| 20 | ಬಾಗಲಕೋಟೆ | 190 | 3090 | 1710000 | 1140000 | 8130000 | 10980000 |
| 21 | ಧಾರವಾಡ | 144 | 2065 | 1296000 | 864000 | 5331000 | 7491000 |
| 22 | ಗದಗ | 122 | 1769 | 1098000 | 732000 | 4575000 | 6435000** |
| 23 | ಹಾವೇರಿ | 223 | 3164 | 2007000 | 1338000 | 8154000 | 11499000 |
| 24 | ಉತ್ತರ ಕನ್ನಡ | 231 | 2721 | 2079000 | 1386000 | 6777000 | 10242000 |
| 25 | ಕಲಬುರಗಿ | 262 | 4474 | 2358000 | 1572000 | 11850000 | 15780000 |
| 26 | ಬೀದರ್ | 185 | 3266 | 1665000 | 1110000 | 8688000 | 11463000 |

| | | | | | | | |
|---|---|---|---|---|---|---|---|
| 27 | ಬಳ್ಳಾರಿ | 238 | 4419 | 2142000 | 1422000 | 11835000 | 15399000 |
| 28 | ರಾಯಚೂರು | 179 | 3519 | 1611000 | 1074000 | 9483000 | 12168000 |
| 29 | ಯಾದಗಿರಿ | 122 | 2326 | 1098000 | 732000 | 6246000 | 8076000 |
| 30 | ಕೊಪ್ಪಳ | 153 | 2759 | 1377000 | 918000 | 7359000 | 9654000 |
| ಒಟ್ಟು | | **5907** | **94637** | **53307000** | **35538000** | **248373000** | **337218000** |

* ಉಡುಪಿ ಜಿಲ್ಲೆಗೆ ಮೊದಲನೇ ತ್ರೈಮಾಸಿಕ ಕಂತಿನಲ್ಲಿ ಕೊರತೆಯಾಗಿರುವ ರೂ. 7,15,170/- ಗಳನ್ನು ಸೇರಿಸಿ ಬಿಡುಗಡೆ ಮಾಡಲಾಗಿದೆ.

** ಗದಗ ಜಿಲ್ಲೆಗೆ ಮೊದಲನೇ ತ್ರೈಮಾಸಿಕ ಕಂತಿನಲ್ಲಿ ಕೊರತೆಯಾಗಿರುವ ರೂ. 30,000/- ಗಳನ್ನು ಸೇರಿಸಿ ಬಿಡುಗಡೆ ಮಾಡಲಾಗಿದೆ.

(ಚೇತನ. ಎಂ) 18/9/21

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

18/09/21